ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/201/ಇಎಸ್‌ಟಿ(7)/2016

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 21-02-2017.

## ಸುತ್ತೋಲೆ

-*-

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್ / ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸೇವಾ ವಿಷಯಗಳು, ವೈಯಕ್ತಿಕ ಮತ್ತು ಇನ್ನಿತರೇ ಮನವಿಗಳನ್ನು ಸಂಬಂಧಪಟ್ಟ ಸಂಸ್ಥೆಗಳ ಪ್ರಾಂಶುಪಾಲರು ಕೂಲಂಕಷವಾಗಿ ಪರಿಶೀಲಿಸಿ ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಸ್ಪಷ್ಟ ಅಭಿಪ್ರಾಯ / ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಮೇಲಾಧಿಕಾರಿಗಳ ಕಛೇರಿಗೆ ಸಲ್ಲಿಸಬೇಕಾಗಿರುತ್ತದೆ. ಆದರೆ ಸದರಿ ಮನವಿಗಳನ್ನು ಅಧೀನದಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗೆ ಹಿಂಬರಹ ನೀಡುವ ರೀತಿಯಲ್ಲಿ ಮೇಲಾಧಿಕಾರಿಗಳಿಗೂ ಕೇವಲ ಹಿಂಬರಹ ಮೂಲಕ ಮುಂದಿನ ಕ್ರಮಕ್ಕಾಗಿ ನಿರ್ದೇಶನಾಲಯಕ್ಕೆ ಸಲ್ಲಿಸುತ್ತಿರುವುದು ಕಂಡುಬಂದಿರುತ್ತದೆ. ಇದು ಶಿಷ್ಟಾಚಾರದ ಉಲ್ಲಂಘನೆಯಾಗಿರುತ್ತದೆ. ಆದ್ದರಿಂದ, ಇಲಾಖೆಯ ಅಧೀನ ಸಂಸ್ಥೆಗಳಲ್ಲಿನ ಸಿಬ್ಬಂದಿಗಳ ಮನವಿಗಳನ್ನು ಇಲಾಖೆಗೆ ಮುಂದಿನ ಕ್ರಮಕ್ಕಾಗಿ ಹಿಂಬರಹ ಮೂಲಕ ಸಲ್ಲಿಸದೇ, ಸದರಿ ಮನವಿಯನ್ನು ಸರ್ಕಾರದ ಆದೇಶ ಮತ್ತು ನಿಯಮಗಳನ್ವಯ ಮತ್ತು ಸಂಬಂಧಪಟ್ಟ ದಾಖಲಾತಿಗಳನ್ನು ಕ್ರಮಬದ್ಧವಾಗಿದೆಯೇ ಎಂಬ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ ತಮ್ಮ ಸ್ಪಷ್ಟ ಅಭಿಪ್ರಾಯ ಮತ್ತು ಸೂಕ್ತ ಶಿಫಾರಸ್ಸಿನೊಂದಿಗೆ ಸದರಿಯವರ ಮನವಿಯನ್ನು ಸಂಬಂಧಪಟ್ಟ ಸರ್ಕಾರದ ಆದೇಶ / ಸುತ್ತೋಲೆ / ಅಧಿಸೂಚನೆ / ಜ್ಞಾಪನ ಮತ್ತು ಇನ್ನಿತರೇ ಪ್ರತಿಗಳೊಂದಿಗೆ ಮುಂದಿನ ಕ್ರಮಕೈಗೊಳ್ಳಲು ನಿರ್ದೇಶನಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಲಾಗಿದೆ. ಇಲ್ಲವಾದಲ್ಲಿ, ಕರ್ನಾಟಕ ಸರ್ಕಾರಿ ನೌಕರರ (ವರ್ತನೆ) ನಿಯಮಗಳು, 1966ರ ಉಲ್ಲಂಘನೆ ಎಂದು ಪರಿಗಣಿಸಿ, ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಗಳು, 1957 ರಡಿಯಲ್ಲಿ / ಕರ್ನಾಟಕ ಖಾಸಗಿ ಶೈಕ್ಷಣಿಕ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮಗಳು, 1978ರನ್ವಯ ಶಿಸ್ತು ಕ್ರಮಕೈಗೊಳ್ಳಲು ಕ್ರಮವಹಿಸಲಾಗುವುದು ಎಂದು ಸೂಚಿಸಿದೆ.

ನಿರ್ದೇಶಕರು

ಗೆ:-

ತಾಂತ್ರಿಕ ಶಿಕ್ಷಣ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್ / ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

ಪ್ರತಿ:-

1. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಎಲ್ಲಾ ಅಧಿಕಾರಿ / ಸಿಬ್ಬಂದಿ ವರ್ಗದವರಿಗೆ ಮಾಹಿತಿಗಾಗಿ;
2. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು (ವೆಬ್‌ಸೈಟ್‌ನಲ್ಲಿ ಅಳವಡಿಸಲು);
3. ನಿರ್ದೇಶಕರ ಆಪ್ತ ಶಾಖೆ;
4. ರಕ್ಷಾ ಕಡತಕ್ಕೆ;
5. ಕಛೇರಿ ಪ್ರತಿ.

ರವಾನಿಸಲಾಗಿದೆ
6037/2
4/3/17

MOHAMMED ABRAR SHA
First Division Assistant

D_IL-16